**All India Radio: Bangalore**
**Regional Bulletin In Kannada**
**29.04.2026 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**29.04.2026 / 6.40 p.m.**

***************

**ಮುಖ್ಯಾಂಶಗಳು**

1. **ಜಲಜೀವನ್ ಮಿಷನ್ ಯೋಜನೆಯಡಿ ಕುಡಿಯುವ ನೀರಿನ ಕಾಮಗಾರಿ ಅನುಷ್ಠಾನದಲ್ಲಿ ಪಾರದರ್ಶಕತೆಗೆ ಒತ್ತು – ಮುಖ್ಯಮಂತ್ರಿ ಸಿದ್ದರಾಮಯ್ಯ**
2. **ಧಾರವಾಡ ವಿದ್ಯಾರ್ಥಿ ಆತ್ಮಹತ್ಯೆ ಪ್ರಕರಣ ; ಕುಟುಂಬಕ್ಕೆ ನ್ಯಾಯ ಸಿಗುವವರೆಗೂ ಹೋರಾಟ – ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ**
3. **2028ರ ಒಳಗೆ ಕ್ವಾಂಟಮ್ ಸಿಟಿ ಗಮನಾರ್ಹ ಪ್ರಗತಿ ಸಾಧಿಸುವ ಗುರಿ – ಸಚಿವ ಎನ್.ಎಸ್.ಬೋಸರಾಜು**
4. **ತಿರುಪತಿಗೆ 6 ತಿಂಗಳಲ್ಲಿ 20ಲಕ್ಷ ಕೆ.ಜಿ. ನಂದಿನಿ ತುಪ್ಪ ಪೂರೈಕೆ ; ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್**

---

ಕುಡಿಯುವ ನೀರಿನ ಕಾಮಗಾರಿಗಳ ಅನುಷ್ಠಾನದಲ್ಲಿ ಕರ್ನಾಟಕ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದೆ ಗುಣಮಟ್ಟವನ್ನು ಕಾಯ್ದುಕೊಂಡಿದ್ದು, ಜಲ್ ಜೀವನ್ ಮಿಷನ್ ಯೋಜನೆಯಡಿಯ ಪ್ರತಿಯೊಂದು ಕಾಮಗಾರಿಗಳನ್ನು ಮೂರನೇ ಏಜೆನ್ಸಿ ಮೂಲಕ ಪರಿಶೀಲನೆ ನಡೆಸಲಾಗುತ್ತಿದ್ದು, ಪಾರದರ್ಶಕತೆಗೆ ಒತ್ತು ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಇಂದು ಜಲ್‌ಜೀವನ್ ಮಿಷನ್ 2.0 ಕುರಿತಂತೆ ಕೇಂದ್ರ ಜಲ ಶಕ್ತಿ ಸಚಿವ ಸಿ.ಆರ್.ಪಾಟೀಲ್ ಅವರೊಂದಿಗೆ ಮುಖ್ಯಮಂತ್ರಿ ವೀಡಿಯೋ ಸಂವಾದ ನಡೆಸಿ, ರಾಜ್ಯದಲ್ಲಿ ಈವರೆಗೆ 101.31 ಲಕ್ಷ ಗ್ರಾಮೀಣ ಕುಟುಂಬಗಳ ಪೈಕಿ 88.06 ಮನೆಗಳಿಗೆ ನಳಸಂಪರ್ಕ ಕಲ್ಪಿಸಿದ್ದು, ಶೇ.86.93 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಹೇಳಿದರು.

ಕುಡಿಯುವ ನೀರಿನ ಉತ್ಕೃಷ್ಟತಾ ಕೇಂದ್ರವನ್ನು ಸ್ಥಾಪಿಸಲಾಗುತ್ತಿದ್ದು, ಇದು ಜ್ಞಾನ ಮತ್ತು ನಿರ್ದೇಶನ ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ. 259 ಗ್ರಾಮಗಳಿಗೆ ಈಗಾಗಲೇ ದಿನದ 24 ಗಂಟೆಗಳಲ್ಲಿ ನೀರಿನ ಸರಬರಾಜು ಸಾಧಿಸಲಾಗಿದ್ದು, ಈ ಮಿಷನ್‌ಗಿರುವ ಪರಿವರ್ತನಾ ಸಾಮರ್ಥ್ಯವನ್ನು ಸಾಬೀತುಪಡಿಸಿದೆ. ಎಲ್ಲಾ ಕಾಮಗಾರಿಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಲು ಕರ್ನಾಟಕ ಸಂಪೂರ್ಣವಾಗಿ ಬದ್ಧವಾಗಿದೆ. ಮುಂಗಡ ವೆಚ್ಚದ ಮರುಪಾವತಿಗಳು ಸೇರಿದಂತೆ ಬಾಕಿಯಿರುವ ಎಲ್ಲಾ ಅನುದಾನವನ್ನು ಶೀಘ್ರವೇ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರವನ್ನು ಮುಖ್ಯಮಂತ್ರಿಯವರು ಒತ್ತಾಯಿಸಿದರು.

---

ಕನ್ನಡ ಪುಸ್ತಕ ಪ್ರಾಧಿಕಾರದಿಂದ ನಾಲ್ಕು ಹೊಸ ಪ್ರಶಸ್ತಿಗಳನ್ನು ನೀಡಲು ಉದ್ದೇಶಿಸಿದ್ದು, ನಂಜನಗೂಡು ತಿರುಮಲಾಂಬ ಪ್ರಶಸ್ತಿ, ಡಾ. ಹಾ.ಮಾ. ನಾಯಕ ಪ್ರಶಸ್ತಿ, ಪಿ.ಆರ್. ತಿಪ್ಪೇಸ್ವಾಮಿ ಪ್ರಶಸ್ತಿ ಹಾಗೂ ಗಳಗನಾಥ ಪ್ರಶಸ್ತಿ ಎಂದು ಈ ಪ್ರಶಸ್ತಿಗಳಿಗೆ ಹೆಸರಿಸಲಾಗಿದ್ದು, ರಾಜ್ಯದ ನಾಲ್ಕು ಕಂದಾಯ ವಿಭಾಗಗಳಿಗೆ ತಲಾ ಒಂದರಂತೆ ಈ ಪ್ರಶಸ್ತಿಗಳನ್ನು ನೀಡಲಾಗುವುದು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ಮಾನಸ ಹೇಳಿದ್ದಾರೆ.

ಕನ್ನಡ ಪುಸ್ತಕ ಪ್ರಾಧಿಕಾರ ಅತ್ಯಂತ ಮಹತ್ವಾಂಕಾಂಕ್ಷೆಯಿಂದ ಆರಂಭಿಸಿರುವ ಮನೆಗೊಂದು ಗ್ರಂಥಾಲಯ ಯೋಜನೆಯಡಿ ಗ್ರಂಥಾಲಯ ಅನುಷ್ಠಾನದ ಕಾರ್ಯಕ್ರಮದ ಮೂಲಕ ಗುರುತಿಸಿಕೊಂಡವರನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುತ್ತದೆ. ನಾಲ್ಕು ಕಂದಾಯ ವಿಭಾಗಳಲ್ಲಿ ಒಂದೊಂದು ವಿಭಾಗದಲ್ಲಿಯೂ ಒಬ್ಬರಂತೆ ಅತ್ಯುತ್ತಮ ಗ್ರಂಥಾಲಯ ಹೊಂದಿರುವವರನ್ನು ಗುರುತಿಸಿ ಈ ನಾಲ್ಕು ಜನ ವಿದ್ವಾಂಸರುಗಳ ಹೆಸರಿನಲ್ಲಿ ಸ್ಥಾಪಿತವಾದ ಪ್ರಶಸ್ತಿಗಳನ್ನು ನೀಡಲಾಗುವುದು ಎಂದು ಅವರು ತಿಳಿಸಿದ್ದಾರೆ.

---

ಧಾರವಾಡ ವಿದ್ಯಾರ್ಥಿ ಆತ್ಮಹತ್ಯೆ ಪ್ರಕರಣದಲ್ಲಿ ಕುಟುಂಬಕ್ಕೆ ನ್ಯಾಯ ಸಿಗುವವರೆಗೂ ಹೋರಾಟ ನಡೆಸುವುದಾಗಿ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ ಎಚ್ಚರಿಸಿದ್ದಾರೆ.

ಧಾರವಾಡಕ್ಕೆ ಓದಲು ಬಂದಿದ್ದ ಬಾಗಲಕೋಟೆ ಮೂಲದ ವಿದ್ಯಾರ್ಥಿ ಆದಿತ್ಯ ಮ್ಯಾಗೇರಿ ಆತ್ಮಹತ್ಯೆ ಅತ್ಯಂತ ನೋವಿನ ಸಂಗತಿ ಎಂದು ತೀವ್ರ ಬೇಸರ ವ್ಯಕ್ತಪಡಿಸಿರುವ ಸಚಿವರು, ಅಮಾಯಕ ವಿದ್ಯಾರ್ಥಿಯನ್ನು ಈ ಪ್ರಕರಣದಲ್ಲಿ ಸಿಲುಕಿಸುವ ಪ್ರಯತ್ನ ನಡೆದಿದೆ ಎಂದು ಆರೋಪಿಸಿದ್ದಾರೆ.

ವಿದ್ಯಾರ್ಥಿ ಆತ್ಮಹತ್ಯೆ ಪ್ರಕರಣದ ಬಗ್ಗೆ ಶೀಘ್ರವೇ ನ್ಯಾಯಯುತ ತನಿಖೆ ನಡೆಸುವಂತೆ ಹಾಗೂ ಪ್ರಕರಣದಲ್ಲಿ ಭಾಗಿಯಾದ ತಪ್ಪಿತಸ್ಥ ಪೊಲೀಸ್ ಇನ್ಸಪೆಕ್ಟರ್ ಮತ್ತು ಸಿಬ್ಬಂದಿಯನ್ನು ಕೂಡಲೇ ಅಮಾನತುಗೊಳಿಸಿ, ಕಠಿಣ ಕ್ರಮ ಕೈಗೊಳ್ಳಬೇಕೆಂದು ಪೊಲೀಸ್ ಆಯುಕ್ತರಿಗೆ ದೂರವಾಣಿ ಕರೆ ಮಾಡಿ ಸೂಚನೆ ನೀಡಿದ್ದಾರೆ.

ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ತೀವ್ರ ಹದಗೆಟ್ಟಿದ್ದು, ರಾಜ್ಯ ಸರ್ಕಾರ ಇಡೀ ಪ್ರಕರಣದ ನೈತಿಕ ಹೊಣೆ ಹೊರಬೇಕು ಮತ್ತು ಮೃತ ವಿದ್ಯಾರ್ಥಿಯ ಕುಟುಂಬಕ್ಕೆ ಪರಿಹಾರ ನೀಡಬೇಕೆಂದು ಸಚಿವ ಪ್ರಲ್ಹಾದ ಜೋಶಿ ಆಗ್ರಹಿಸಿದ್ದಾರೆ.

---

ಕರ್ನಾಟಕ ರಾಜ್ಯವನ್ನು ಕ್ವಾಂಟಮ್ ತಂತ್ರಜ್ಞಾನದ ಜಾಗತಿಕ ಕೇಂದ್ರವನ್ನಾಗಿಸುವ ನಿಟ್ಟಿನಲ್ಲಿ ಸ್ಥಾಪಿಸಲಾಗುತ್ತಿರುವ 'ಕ್ವಾಂಟಮ್ ಸಿಟಿ' ನಿರ್ಮಾಣ ಕಾರ್ಯದಲ್ಲಿ 2028 ರ ಒಳಗಾಗಿ ಗಮನಾರ್ಹ ಪ್ರಗತಿ ಸಾಧಿಸುವ ಗುರಿ ಹೊಂದಲಾಗಿದೆ. ಈ ಯೋಜನೆಯು 2035 ರ ವೇಳೆಗೆ ಕರ್ನಾಟಕದಲ್ಲಿ 20 ಬಿಲಿಯನ್ ಡಾಲರ್ ಮೊತ್ತದ ಕ್ವಾಂಟಮ್ ಆರ್ಥಿಕತೆಯನ್ನು ಸೃಷ್ಟಿಸುವ ಸರ್ಕಾರದ ದೃಷ್ಟಿಕೋನವನ್ನು ಸಾಕಾರಗೊಳಿಸಲಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ತಿಳಿಸಿದ್ದಾರೆ.

ಬೆಂಗಳೂರು ಹೊರವಲಯದ ಹೆಸರಘಟ್ಟದ ಸಮೀಪ ಕ್ವಾಂಟಮ್ ಸಿಟಿಗಾಗಿ ಮಂಜೂರಾಗಿರುವ 6.23 ಎಕರೆ ಭೂಮಿಯನ್ನು ಇಂದು ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸಿದ ನಂತರ ಮಾತನಾಡಿದ ಅವರು, 'ಕ್ವಾಂಟಮ್ ತಂತ್ರಜ್ಞಾನ ಕ್ಷೇತ್ರದಲ್ಲಿ ಕರ್ನಾಟಕವು ಈಗಾಗಲೇ ದೇಶದಲ್ಲೇ ಮುಂಚೂಣಿಯಲ್ಲಿದೆ ಎಂದು ಹೇಳಿದರು.

ಉದ್ದೇಶಿತ ಕ್ವಾಂಟಮ್ ಸಿಟಿಯು ಅತ್ಯಾಧುನಿಕ ಸೌಲಭ್ಯಗಳನ್ನು ಹೊಂದಿರಲಿದ್ದು, ಇಲ್ಲಿ ಪೈಲೆಟ್ ಫ್ಯಾಬ್ರಿಕೇಶನ್ ಲೈನ್ಸ್, ಕಾಮನ್ ಕಂಪ್ಯೂಟಿಂಗ್ ಮೂಲಸೌಕರ್ಯ, ಸಂಶೋಧನಾ ಪ್ರಯೋಗಾಲಯಗಳು ಹಾಗೂ ಸ್ಟಾರ್ಟ್ ಅಪ್ ಗಳಿಗಾಗಿ ವಿಶೇಷ ಕೆಲಸದ ಸ್ಥಳ ಮತ್ತು ಇನ್ಕ್ಯುಬೇಶನ್ ಕೇಂದ್ರಗಳು ತಲೆ ಎತ್ತಲಿವೆ. ಈ ಮೂಲಕ ಸಂಶೋಧಕರಿಗೆ ಮತ್ತು ಉದ್ಯಮಿಗಳಿಗೆ ಒಂದೇ ಸೂರಿನಡಿ ಎಲ್ಲಾ ತಾಂತ್ರಿಕ ಬೆಂಬಲ ಸಿಗುವಂತೆ ಮಾಡಲಾಗುವುದು,' ಎಂದು ಸಚಿವರು ತಿಳಿಸಿದರು.

---

ಕರ್ನಾಟಕ ರಾಜ್ಯ ಪ್ರೌಢಶಾಲಾ ಶಿಕ್ಷಣ ಸಂಸ್ಥೆ ಹಾಗೂ ರಾಜ್ಯ ಚುನಾವಣಾಧಿಕಾರಿಗಳ ಕಚೇರಿಯಿಂದ 2026–2031ನೇ ಅವಧಿಗೆ ಸಂಬಂಧಿಸಿದಂತೆ ಶಾಲಾ ಹಾಗೂ ತಾಲೂಕು ಕಾರ್ಯಕಾರಿ ಸಮಿತಿ ಸದಸ್ಯರ ಚುನಾವಣೆಯ ಪರಿಷ್ಕೃತ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ.

---

ಮುಂದಿನ ಆರು ತಿಂಗಳ ಕಾಲ ತಿರುಪತಿ–ತಿರುಮಲ ಸನ್ನಿಧಾನಕ್ಕೆ ಬಮೂಲ್‌ನಿಂದ ತಿಂಗಳಿಗೆ 2 ಲಕ್ಷ ಕೆ.ಜಿ. ನಂದಿನಿ ತುಪ್ಪ ಸರಬರಾಜು ಮಾಡಲಾಗುತ್ತದೆ ಎಂದು ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ತಿಳಿಸಿದ್ದಾರೆ.

ಬೆಂಗಳೂರು ಸಹಕಾರ ಹಾಲು ಒಕ್ಕೂಟ–ಬಮೂಲ್ ಕಚೇರಿ ಆವರಣದಲ್ಲಿಂದು ತಿರುಪತಿಗೆ ತುಪ್ಪ ಪೂರೈಕೆ ವಾಹನಕ್ಕೆ ಹಸಿರು ನಿಶಾನೆ ತೋರಿಸಿದ ಅವರು, ತಿರುಪತಿಗೆ ನಂದಿನಿ ತುಪ್ಪ ಪೂರೈಕೆಗೆ ಟೆಂಡರ್ ಪಡೆಯಲಾಗಿದೆ. ಇದರ ಮೊತ್ತ 136 ಕೋಟಿ ರೂಪಾಯಿಗಳಾಗಿದ್ದು, ಪ್ರತಿನಿತ್ಯ 12.5 ಟನ್ ನಂತೆ ಮುಂದಿನ ಆರು ತಿಂಗಳು ತುಪ್ಪ ಸರಬರಾಜಾಗಲಿದೆ ಎಂದರು.

ಸಾಗಾಣಿಕೆಗೆ ಡಿಜಿಟಲ್ ಲಾಕ್ ತಂತ್ರಜ್ಞಾನ ಬಳಸಿಕೊಳ್ಳಲಾಗಿದೆ. ನಾವು ಕೊಟ್ಟ ಪಾಸ್ ವರ್ಡ್ ಅಲ್ಲಿ ನಮೂದಿಸಿದರೆ ಮಾತ್ರ ತೆರೆಯಬಹುದು. ಗ್ರಾಹಕರಿಗೂ ಸಹ ಇದೆ ರೀತಿ ಗುಣಮಟ್ಟದ ಪದಾರ್ಥ ನೀಡಲಾಗುತ್ತಿದೆ. ನಂದಿನಿ ಹೆಸರನ್ನು ದುರ್ಬಳಕೆ ಮಾಡಿಕೊಂಡು ಮಾರುಕಟ್ಟೆಯಲ್ಲಿ ಅಕ್ರಮ ಎಸಗುತ್ತಿರುವವರ ವಿರುದ್ದ ಈಗಾಗಲೇ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಇದೇ ವೇಳೆ ಅವರು ತಿಳಿಸಿದರು.

---

ಬೆಂಗಳೂರು ನಗರದಲ್ಲಿ ಗುಂಡಿ ಮುಚ್ಚುವ ಕಾಮಗಾರಿಯಲ್ಲಿ ಸಾಕಷ್ಟು ಅಕ್ರಮ ನಡೆದಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಟೀಕಿಸಿದ್ದಾರೆ.

ಬಿಜೆಪಿ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಅವರು, ನಗರದ ಚಾಮರಾಜಪೇಟೆಯ ರಸ್ತೆಗಳಲ್ಲಿ 150 ಗುಂಡಿ ಇದ್ದು, 140 ಗುಂಡಿ ಮುಚ್ಚಲು 1 ಕೋಟಿ 40 ಕೋಟಿ ರೂಪಾಯಿ ಖರ್ಚು ಮಾಡಲಾಗಿದೆ. ಒಂದು ಗುಂಡಿ ಮುಚ್ಚಲು 1 ಲಕ್ಷ ಖರ್ಚು ಮಾಡಿದ್ದಾಗಿ ಅಧಿಕಾರಿಗಳು ತೋರಿಸಿದ್ದಾರೆ ಎಂದು ಆರೋಪಿಸಿದರು.

ರಾಜಾಜಿನಗರ, ಗೋವಿಂದರಾಜನಗರ, ವಿಜಯನಗರ, ಜಯನಗರ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಗುಂಡಿ ಮುಚ್ಚು ಮುಚ್ಚುವ ಕಾಮಗಾರಿ ವಿಷಯದಲ್ಲಿ ಸುಳ್ಳು ಮಾಹಿತಿ ನೀಡಲಾಗಿದೆ. ಕಸ ನಿರ್ವಹಣೆಯಲ್ಲೂ ಸಾಕಷ್ಟು ಲೋಪವಿದ್ದು, ಈ ಬಗ್ಗೆ ತನಿಖೆ ಆಗಬೇಕೆಂದು ಅವರು ಒತ್ತಾಯಿಸಿದರು.

---

ಬೇಸಿಗೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಹಲವು ಸುಧಾರಣೆಗಳನ್ನು ಕೈಗೊಂಡಿದ್ದು, ಸಾರ್ವಜನಿಕರು ಆರೋಗ್ಯ ಕಾಪಾಡಿಕೊಳ್ಳಲು ವೈಯಕ್ತಿಕವಾಗಿ ಹಲವು ಸುರಕ್ಷತೆಗಳನ್ನು ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಮನವಿ ಮಾಡಿದ್ದಾರೆ.

ದಿನನಿತ್ಯ ಹೆಚ್ಚು ನೀರನ್ನು ಕುಡಿಯುವ ಅಭ್ಯಾಸ ಮಾಡಿಕೊಳ್ಳಬೇಕು. ಮಧ್ಯಾಹ್ನ 12 ಗಂಟೆಯಿಂದ 3 ಗಂಟೆಯವರೆಗೆ ಅನಾವಶ್ಯಕವಾಗಿ ತಿರುಗಾಡಬಾರದು. ಹಗುರವಾದ, ತಿಳಿ ಬಣ್ಣದ ಬಟ್ಟೆ ಧರಿಸಬೇಕು. ತಲೆ ಮೇಲೆ ಟೋಪಿ ಬಳಸುವುದು ಒಳಿತು. ದಟ್ಟ ಬಿಸಿಲಿನಲ್ಲಿ ಗರ್ಭಿಣಿಯರು, ವಯೋವೃದ್ಧರು, ಅನಾರೋಗ್ಯ ಪೀಡಿತರು ಬಿಸಿಲಿನ ತಾಪದಿಂದ ನರಳದೇ ಇರುವ ಹಾಗೆ ನೋಡಿಕೊಳ್ಳಬೇಕು ಎಂದು ಆಕಾಶವಾಣಿಗೆ ಜಿಲ್ಲಾಧಿಕಾರಿ ತಿಳಿಸಿದರು.

---

ಬೆಳಗಾವಿಯ ಕೃಷಿ ಇಲಾಖೆ ಪ್ರಧಾನಮಂತ್ರಿ ಕೃಷಿ ಸಿಂಚನ ಯೋಜನೆಯ ಅತ್ಯುತ್ತಮ ಅನುಷ್ಠಾನ ಸೇರಿದಂತೆ ಜಲಾನಯನದ ವಿವಿಧ ಅಭಿವೃದ್ಧಿ ಯೋಜನೆಗಳ ಯಶಸ್ವಿಗೊಳಿಸಿ ಜನರ ಹಾಗೂ ಸರ್ಕಾರದ ಮೆಚ್ಚುಗೆಗೆ ಪಾತ್ರವಾಗಿ ಜಲಾನಯನ ಇಲಾಖೆಯಿಂದ 2025–26ನೇ ಸಾಲಿನ 5 ಪ್ರಶಸ್ತಿಗಳನ್ನು ಪಡೆದುಕೊಂಡು ವಿಶೇಷ ಗಮನ ಸೆಳೆದಿದೆ. ಪ್ರಧಾನಮಂತ್ರಿ ಕೃಷಿ ಸಿಂಚನ ಯೋಜನೆಯಡಿ ಅರಣ್ಯ ಘಟಕ ಪರಿಣಾಮಕಾರಿ ಅನುಷ್ಠಾನಕ್ಕೆ ಪ್ರಥಮ ಸ್ಥಾನ ಲಭಿಸಿದೆ.

ಬೆಳಗಾವಿ ಕಂದಾಯ ವಿಭಾಗದಲ್ಲಿ ಸಮಗ್ರ ಅನುಷ್ಠಾನಕ್ಕೆ ಪ್ರಥಮ ಸ್ಥಾನ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಅನುಷ್ಠಾನದಲ್ಲಿ ದ್ವಿತೀಯ ಸ್ಥಾನ ಲಭಿಸಿದೆ. ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಬೆಳಗಾವಿ ಕೃಷಿ ಇಲಾಖೆಯ ಹಿರಿಯ ಅಧಿಕಾರಿಗಳ ಪ್ರಶಸ್ತಿ ಸ್ವೀಕರಿಸಿದ್ದರು.

ಇಲಾಖೆಯ ಪ್ರಶಸ್ತಿ ಸ್ವೀಕರಿಸಿರುವ ಬೆಳಗಾವಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಎಚ್.ಡಿ. ಕೋಳೆಕರ ಸಂತಸ ವ್ಯಕ್ತಪಡಿಸಿ; ಆಕಾಶವಾಣಿಗೆ ಮಾಹಿತಿ ಹಂಚಿಕೊಂಡರು.

**ಧ್ವನಿ: ಎಚ್.ಡಿ. ಕೋಳೆಕರ**

ಪ್ರಧಾನಮಂತ್ರಿ ಕೃಷಿ ಸಿಂಚನ ಯೋಜನೆಯಡಿ ಬೆಳಗಾವಿ ಜಿಲ್ಲೆಯಲ್ಲಿ ರಾಮದುರ್ಗ, ಬೈಲಹೊಂಗಲ, ಚಿಕ್ಕೋಡಿ ಹಾಗೂ ನಿಪ್ಪಾಣಿಯಲ್ಲಿ ಯೋಜನೆಗಳ ಮಂಜೂರಾತಿ ದೊರೆತಿದೆ. ರಿವಾಡ್ ಎಂಬ ವಿನೂತನ ಯೋಜನೆಯನ್ನು ಅಥಣಿ ತಾಲೂಕಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

__________ಮುಕ್ತಾಯ__________